# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 818
ಸದಸ್ಯರ ಹೆಸರು : ಶ್ರೀ ಕೆ.ಎಸ್. ನವೀನ್
ಉತ್ತರಿಸುವ ದಿನಾಂಕ : 20.02.2024
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರವು ಪುರಸಭೆ, ಪಟ್ಟಣ ಪಂಚಾಯಿತಿ ಮತ್ತು ನಗರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಮೀಸಲಾತಿ ಪಟ್ಟಿಯನ್ನು ಬಿಡುಗಡೆ ಮಾಡದಿರಲು ಕಾರಣವೇನು; | ಅಧ್ಯಕ್ಷ/ ಉಪಾಧ್ಯಕ್ಷರ ಮೀಸಲಾತಿ ನಿಗಧಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ;- |
| (ಆ) | ಸದಸ್ಯರ ಅವಧಿ ವಿಸ್ತರಣೆ ಆಗದೇ ವಿಳಂಬವಾಗಿರುವುದಕ್ಕೆ ಕಾರಣಗಳೇನು; ವಿಸ್ತರಣೆಯಾಗುವುದೇ ಅಥವಾ ಮುಕ್ತಾಯವಾಗುತ್ತದೆಯೇ? ಮಾಹಿತಿ ನೀಡುವುದು? | 1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ\|\| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಲು ಅನುಮೋದನೆ ನೀಡಿರುತ್ತದೆ. ಆದ್ದರಿಂದ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಆದರೆ ಈ ಮಧ್ಯೆ ಮಾನ್ಯ ಮುಖ್ಯಮಂತ್ರಿಗಳು "ಈಗಿರುವ ಆಡಳಿತಾತ್ಮಕ ವ್ಯವಸ್ಥೆಯನ್ನು ಮುಂದುವರೆಸಲು ಸಚಿವ ಸಂಪುಟದ ಮುಂದೆ ವಿಷಯವನ್ನು ತರಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೂಚಿಸುವುದು" ಎಂದು ನಿರ್ದೇಶಿಸಿದ ಹಿನ್ನಲೆಯಲ್ಲಿ ವಿಷಯವನ್ನು ಸಚಿವ ಸಂಪುಟದ ಮುಂದೆ ಮಂಡಿಸಲು ಅಗತ್ಯ ಕ್ರಮವಹಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ದಿನಾಂಕ:26.12.2023ರ ಅನಧಿಕೃತ ಟಿಪ್ಪಣಿಯಲ್ಲಿ ಕೋರಲಾಗಿದೆ. ಸದರಿ ಇಲಾಖೆಯಿಂದ ಆದೇಶದ |

| | | |
|---|---|---|
| | | ಪ್ರತಿಯನ್ನು ನಿರೀಕ್ಷಿಸಲಾಗಿದೆ.<br><br>2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿದೆ. ಪ್ರಕರಣವು ದಿನಾಂಕ:06.03.2024 ರಂದು ವಿಚಾರಣೆಗೆ ಬರಲಿದೆ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಸರ್ಕಾರದಿಂದ ಈ ಬಗ್ಗೆ ಸೂಕ್ತ ಕ್ರಮವಹಿಸಲಾಗುವುದು.<br><br>ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್ 42 ರ ಪ್ರಕಾರ ಕೌನ್ಸಿಲರ್‌ಗಳ ಅವಧಿಯು ಚುನಾವಣೆ ನಡೆದ ನಂತರ ಪ್ರಥಮ ಸಭೆ ನಡೆದ ದಿನಾಂಕದಿಂದ 05 ವರ್ಷಗಳಾಗಿರುತ್ತದೆ. ಅದರಂತೆ ಚುನಾಯಿತ ಕೌನ್ಸಿಲರ್‌ಗಳ ಅವಧಿಯನ್ನು ವಿಸ್ತರಿಸಲು ಅವಕಾಶವಿರುವುದಿಲ್ಲ. |

**ಸಂಖ್ಯೆ:** ನಅಇ 13 ಎಲ್‌ಸಿಕ್ಯೂ 2024

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು